8

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 26/6/2020

# ಬೆಂಗಳೂರಲ್ಲಿ ಮತ್ತೆ ಲಾಕ್‌ಡೌನ್ ಮಾಡಲ್ಲ

## ಲಾಕ್‌ಡೌನ್‌ನಿಂದ ಬಡವರಿಗೆ ತೊಂದರೆ ಆಗುತ್ತೆ ವದಂತಿಗಳಿಗೆ ತೆರೆ ಎಳೆದ ಸಚಿವ ಆರ್.ಅಶೋಕ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಅದರಲ್ಲೂ ರಾಜಧಾನಿ ಬೆಂಗಳೂರಿನಲ್ಲಿ ದಿನೇದಿನೇ ಕೊರೋನಾ ಪ್ರಕರಣ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮತ್ತೊಮ್ಮೆ



ಲಾಕ್‌ಡೌನ್ ಜಾರಿಗೊಳಿಸಲಾಗುತ್ತದೆ ಎಂಬ ವದಂತಿಗಳಿಗೆ ರಾಜ್ಯ ಸರ್ಕಾರ ತೆರೆ ಎಳೆದಿದೆ. ಯಾವುದೇ ಕಾರಣಕ್ಕೂ ಮತ್ತೊಮ್ಮೆ ಲಾಕ್‌ಡೌನ್ ಹೇರುವುದಿಲ್ಲ ಎಂದು ಕಂದಾಯ ಸಚಿವ ಆರ್.ಅಶೋಕ್ ಸ್ಪಷ್ಟಪಡಿಸಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೇತೃತ್ವದಲ್ಲಿ ಕೋವಿಡ್ ನಿಯಂತ್ರಣ ಹಿನ್ನೆಲೆಯಲ್ಲಿ ನಡೆದ ತುರ್ತು ಸಭೆಯ ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಅವರು, ಲಾಕ್‌ಡೌನ್ ಜಾರಿಗೊಳಿಸಿದರೆ ಶ್ರಮಿಕ ವರ್ಗಕ್ಕೆ ಮತ್ತಷ್ಟು ತೊಂದರೆಯಾಗುವ ಸಾಧ್ಯತೆ ಇದೆ. ↘ 6

### ಲಾಕ್‌ಡೌನ್ ತಪ್ಪಿಸಲು ನಿಯಮ ಪಾಲಿಸಿ



**ಬೆಂಗಳೂರಿನಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚಾಗುತ್ತಿವೆ. ಸರ್ಕಾರ ಬಿಗಿ ಕ್ರಮ ಕೈಗೊಂಡಿದ್ದರೂ ಕೆಲವರು ನಿಯಮಗಳನ್ನು ಪಾಲನೆ ಮಾಡುತ್ತಿಲ್ಲ. ಮತ್ತೊಮ್ಮೆ ಲಾಕ್‌ಡೌನ್ ಆಗಬಾರದು ಎಂದಾದರೆ ಸಾರ್ವಜನಿಕರು ಸರ್ಕಾರದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು.**

• **ಬಿ.ಎಸ್.ಯಡಿಯೂರಪ್ಪ** ಮುಖ್ಯಮಂತ್ರಿ

# ಬೆಂಗಳೂರಲ್ಲಿ ಮತ್ತೆ ಲಾಕ್‌ಡೌನ್ ಮಾಡಲ್ಲ

↙ **ಮೊದಲ ಪುಟದಿಂದ**

ಬಡ ವರ್ಗದವರಿಂದ ಲಾಕ್‌ಡೌನ್ ಬೇಡ ಎಂಬ ಅಭಿಪ್ರಾಯಗಳು ವ್ಯಕ್ತವಾದ ಹಿನ್ನೆಲೆಯಲ್ಲಿ ಬಡವರ ಪರವಾಗಿ ತೀರ್ಮಾನ ಕೈಗೊಳ್ಳಲಾಗಿದೆ. ಕೊರೋನಾದೊಂದಿಗೆ ನಾವು ಮುಂದುವರಿಯಬೇಕಾದ ಅನಿವಾರ್ಯತೆ ನಿರ್ಮಾಣಗೊಂಡಿದೆ ಎಂದು ತಿಳಿಸಿದ್ದರು.

**ನಿಯಮ ಪಾಲಿಸಿ- ಸಿಎಂ:** ಮತ್ತೊಮ್ಮೆ ಲಾಕ್‌ಡೌನ್ ಆಗಬಾರದು ಎಂದಾದರೆ ಸಾರ್ವಜನಿಕರು ಸರ್ಕಾರದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಯಡಿಯೂರಪ್ಪ ಹೇಳಿದ್ದಾರೆ. ಸಭೆಗೂ ಮೊದಲು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಕೋವಿಡ್-19 ಸೋಂಕು ಪ್ರಕರಣಗಳು ಹೆಚ್ಚಾಗುತ್ತಿವೆ. ಸರ್ಕಾರ ಬಿಗಿಯಾದ ಕ್ರಮಗಳನ್ನು ಕೈಗೊಂಡಿದ್ದರೂ ಕೆಲವರು ನಿಯಮಗಳನ್ನು ಪಾಲನೆ ಮಾಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೇಶದ ಇತರೆ ನಗರಗಳಿಗೆ ಹೋಲಿಕೆ ಮಾಡಿದರೆ ಬೆಂಗಳೂರು ಮಾದರಿ ನಗರವಾಗಿದೆ. ರಾಜ್ಯದಲ್ಲಿ ಕೋವಿಡ್ ಸೋಂಕು ತಡೆಗಟ್ಟುವಲ್ಲಿ ನಿಯಂತ್ರಣ ತಪ್ಪಿಲ್ಲ. ಹತ್ತಾರು ದಿನಗಳಿಂದ ಸೋಂಕು ಹೆಚ್ಚಾಗುತ್ತಿರುವುದನ್ನು ತಡೆಗಟ್ಟಲು ಸಂಪೂರ್ಣ ಕ್ರಮ ಕೈಗೊಳ್ಳಲಾಗಿದೆ. ಸೋಂಕು ನಿಯಂತ್ರಣಕ್ಕೆ ಬರಬೇಕೆಂದರೆ ಜನರು ಸ್ವಯಂಪ್ರೇರಿತರಾಗಿ ಕ್ವಾರಂಟೈನ್ ನಿಯಮಗಳನ್ನು ಪಾಲನೆ ಮಾಡಬೇಕು. ಸರ್ಕಾರದ ಕ್ರಮಕ್ಕೆ ಸ್ಪಂದಿಸಬೇಕು. ಸಾರ್ವಜನಿಕರು ಅನಗತ್ಯವಾಗಿ ರಸ್ತೆಗಿಳಿಯಬಾರದು ಎಂದು ಮನವಿ ಮಾಡಿದರು.

ಬೆಂಗಳೂರಿನಲ್ಲಿ ಹೆಚ್ಚು ಪ್ರಕರಣ ಬಂದಿರುವ ಕೆಲ ಪ್ರದೇಶಗಳನ್ನು ಸೀಲ್‌ಡೌನ್ ಮಾಡಲಾಗಿದ್ದು, ಲಾಕ್‌ಡೌನ್ ಮಾಡಿಲ್ಲ ಎಂದು ಮುಖ್ಯಮಂತ್ರಿಗಳು ಇದೇ ವೇಳೆ ಸ್ಪಷ್ಟಪಡಿಸಿದರು.